296 (148) ಶ್ರೀ ಅಶೋಕ ಗುರಪ್ಪ ಶಾಬಾದಿ (ಸಿಂಧಗಿ): ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಿಂಧಗಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಟಿ.ಸಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಕೊರತೆ ಇರುವ ಟಿ.ಸಿಗಳ ಸಂಖ್ಯೆ ಎಷ್ಟು;

ಇ) ಈ ಕೊರತೆಯನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು):

ಅ) ಸಿಂಧಗಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಟಿ.ಸಿಗಳ ಕೊರತೆ ಇರುವುದು ಗಮನಕ್ಕೆ ಬಂದಿರುತ್ತದೆ.

ಆ) ಸಿಂಧಗಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ವಿಫಲಗೊಂಡ ವಿದ್ಯುತ್ ವಿತರಣಾ ಟ್ರಾನ್ಸ್ ಫಾರ್ಮರ್‌ಗಳನ್ನು ಬದಲಾಯಿಸಲು 25 ವಿತರಣಾ ಟ್ರಾನ್ಸ್‌ಫಾರ್ಮರ್‌ಗಳು ಬೇಕಾಗಿರುತ್ತದೆ. ಅಲ್ಲದೇ ಸದರಿ ವಿಧಾನಸಭಾ ಕ್ಷೇತ್ರದಲ್ಲಿ ವಿವಿಧ ಹೊಸ ಕಾರ್ಯಗಳಿಗಾಗಿ 117 ವಿತರಣಾ ಟ್ರಾನ್ಸ್‌ಫಾರ್ಮರ್‌ಗಳು ಬೇಕಾಗಿರುತ್ತದೆ.

ಇ) ಕುಡಿಯುವ ನೀರು ಸರಬರಾಜಿಗೆ ಸಂಬಂಧಿಸಿದ ಟ್ರಾನ್ಸ್‌ಫಾರ್ಮರ್‌ಗಳು ಹಾಗೂ ಗ್ರಾಮಗಳ ಮನೆಗಳಿಗೆ ವಿದ್ಯುತ್ ಸರಬರಾಜು ಮಾಡುವ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳು ವಿಫಲಗೊಂಡಾಗ, ಅವುಗಳನ್ನು ಮೊದಲ ಆದ್ಯತೆ ಮೇರೆಗೆ ಬದಲಾಯಿಸಲಾಗುತಿದೆ. ವಿಫಲವಾದ ವಿರತಣಾ ಟ್ರಾನ್ಸ್‌ಫಾರ್ಮರ್‌ಗಳನ್ನು ರಿಪೇರಿ ಕೇಂದ್ರದಲ್ಲಿ ಕೂಡಲೇ ಸರಿಪಡಿಸಿ ವಿಫಲಗೊಳ್ಳುವ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳ ಬದಲಿಕೆ ಕಾರ್ಯಕ್ಕಾಗಿ ಒದಗಿಸಲಾಗುತ್ತಿದೆ.

ವಿವಿಧ ಹೊಸ ಕಾಮಗಾರಿಗಳಿಗೆ 37 ಹೊಸ ವಿತರಣಾ ಟ್ರಾನ್ಸ್ ಫಾರ್ಮರ್‌ಗಳ ಖರೀದಿಗಾಗಿ ಈಗಾಗಲೇ ಖರೀದಿ ಆದೇಶವನ್ನು ನೀಡಲಾಗಿದೆ.

ಬಾಕಿ ಉಳಿಯುವ ಹೊಸ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳ ಖರೀದಿಗಾಗಿ ಟೆಂಡರ್‌ಗಳನ್ನು ಕರೆಯಲಾಗಿದ್ದು ಖರೀದಿ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.

297 (150) ಶ್ರೀ ಅಶೋಕ ಗುರಪ್ಪ ಶಾಬಾದಿ (ಸಿಂಧಗಿ): ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ 3 ವರ್ಷಗಳಲ್ಲಿ ಸಿಂಧಗಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕೈಗೊಂಡಿರುವ ಕಾಮಗಾರಿಗಳಾವುವು ಹಾಗೂ ಆ ಕಾಮಗಾರಿಗಳಿಗೆ ಬಿಡುಗಡೆಯಾಗಿರುವ ಮೊತ್ತವೆಷ್ಟು (ವರ್ಷಾವಾರು ಕಾಮಗಾರಿವಾರು ವಿವರ ನೀಡುವುದು;

ಆ) ಈ ಎಲ್ಲ ಕಾಮಗಾರಿಗಳು ಪೂರ್ಣಗೊಂಡಿವೆಯೇ;

ಇ) ಇಲ್ಲದಿದ್ದಲ್ಲಿ ಅದಕ್ಕೆ ಕಾರಣಗಳೇನು;

ಈ) ಬಾಕಿ ಇರುವ ಕಾಮಗಾರಿಗಳನ್ನು ಕೂಡಲೇ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು):

ಅ) ಕಾಮಗಾರಿಯ ವಿವರಗಳನ್ನು ಅನುಬಂಧದಲ್ಲಿ ಲಗತ್ತಿಸಿದೆ.

ಆ) ವಿವರಗಳನ್ನು ಅನುಬಂಧದಲ್ಲಿ ಲಗತ್ತಿಸಿದೆ..

ಇ) ಕೆಲಸಗಳು ಪ್ರಗತಿಯಲ್ಲಿದ್ದು, ಶೀಘ್ರದಲ್ಲಿ ಪೂರ್ಣಗೊಳಿಸ ಲಾಗುವುದು.

ಈ) ಮಾರ್ಚ್ 2007ರ ಒಳಗಾಗಿ ಬಹುತೇಕ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು.